(1)

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ**
ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

**ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21** **ದಿನಾಂಕ : 06/03/2021**

**ವಾರ್ಡ್-130ರ ವಾರ್ಡ್ ಸಭೆಯ ನಡವಳಿ.**

**ದಿನಾಂಕ: 06/03/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು ನೋಡಲ್ ಅಧಿಕಾರಿ |
| 2 | ಶ್ರೀ ಕೆ.ಎಂ. ಯಧುಕೃಷ್ಣ | ಸಹಾಯಕ ಇಂಜಿನಿಯರ್ ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀ. ಡಿ. ವಿನಯ್ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ |
| 4 | ಶ್ರೀ ವೆಂಕಟೇಶ್ | ತೋಟಗಾರಿಕೆ ಇಲಾಖೆ |
| 5 | ಶ್ರೀ ರಾಘವೇಂದ್ರ ಎಂ | ಸಹಾಯಕ ಇಂಜಿನಿಯರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ ಓ.ಎಂ. ಬಸವರಾಜ್ | ವಾರ್ಡ್ ಕಮಿಟಿ ಸದಸ್ಯರು |
| 7 | ಶ್ರೀ ರಾಜೇಶ್ ಬಾಬು | ವಾರ್ಡ್ ಕಮಿಟಿ ಸದಸ್ಯರು |
| 8 | ಶ್ರೀ ಎನ್. ಕದರಪ್ಪ | ವಾರ್ಡ್ ಕಮಿಟಿ ಸದಸ್ಯರು |
| 9 | ಶ್ರೀ ಕುಮಾರ್ | ಬೆಸ್ಕಾಂ ಗುತ್ತಿಗೆದಾರರು |
| 10 | ಶ್ರೀ ರಮೇಶ್ ಗೌಡ | ವಾರ್ಡ್ ಕಮಿಟಿ ಸದಸ್ಯರು |
| 11 | ಶ್ರೀ ಬಿ. ಸತೀಶ್ | ವಾರ್ಡ್ ಕಮಿಟಿ ಸದಸ್ಯರು |
| 12 | ಶ್ರೀ ಜಯರಾಮ್ | ವಾರ್ಡ್ ಕಮಿಟಿ ಸದಸ್ಯರು |

Scanned with CamScanner

| | | |
|---|---|---|
| 13 | ಶ್ರೀ ನಾಗೇಂದ್ರ | ವಾರ್ಡ್ ಕಮಿಟಿ ಸದಸ್ಯರು |
| 14 | ಶ್ರೀ ಶಶಿಕುಮಾರ್ | ವಾರ್ಡ್ ಕಮಿಟಿ ಸದಸ್ಯರು |

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

(ಅ) ವಾರ್ಡ್ ಸಂಖ್ಯೆ:- 130ರ ವ್ಯಾಪ್ತಿಯಲ್ಲಿ ಸಾರ್ವಜನಿಕರು ರಸ್ತೆಗಳಲ್ಲಿ ಕಸ(ಗಾರ್ಬೇಜ್)ವನ್ನು ಬಿಸಾಡುತ್ತಿರುವುದನ್ನು ತಪ್ಪಿಸುವ ಸಲುವಾಗಿ ಬಡಾವಣೆಗಳ ಮುಖ್ಯರಸ್ತೆ ಹಾಗೂ ಅಡ್ಡ ರಸ್ತೆಗಳಲ್ಲಿ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಸೂಚಿಸುತ್ತಾ, ಬಡಾವಣೆಗಳನ್ನು ಸ್ವಚ್ಛವಾಗಿಡಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರು ಕೋರಿರುತ್ತಾರೆ. ಅದರಂತೆ ಅಗತ್ಯ ಕ್ರಮ ವಹಿಸುವ ಸಲುವಾಗಿ ಅನುದಾನದ ಕೊರತೆಯಿದ್ದು, ಅನುದಾನ ದೊರೆತ ನಂತರ ಕ್ರಮ ವಹಿಸುವುದಾಗಿ ವಾರ್ಡ್ ಸಂಖ್ಯೆ:- 130ರ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.

(ಆ) ಸದಸ್ಯರಾದ ಶ್ರೀ ಎನ್. ಕದರಪ್ಪನವರು ಗಾಂಧಿನಗರ ಸಮೀಪದ ಕೆರೆಯ ಬದಿಯಲ್ಲಿ ಕೆಲವೊಂದು ಭೂಗಳ್ಳರು ಮನೆಗಳನ್ನು ನಿರ್ಮಿಸುತ್ತಿದ್ದು, ಕೆರೆಯ ಜಾಗವನ್ನು ಸಂರಕ್ಷಿಸುವ ಸಲುವಾಗಿ ಕ್ರಮವಹಿಸಬೇಕೆಂದು ತಿಳಿಸಿರುತ್ತಾರೆ. ಈಗಾಗಲೇ ಕೆರೆಯದಡದಲ್ಲಿ ಅಕ್ರವಾಗಿ 05 ಜನ ನಿವಾಸಿಗಳು ನಿರ್ಮಿಸುತ್ತಿರುವ ಅನಧಿಕೃತ ಮನೆಗಳನ್ನು ತಡೆಗಟ್ಟುವ ಸಲುವಾಗಿ ನೋಟೀಸ್ ನೀಡಿರುವುದಾಗಿ ವಾರ್ಡ್ ಸಂಖ್ಯೆ:-130ರ ಸಹಾಯಕ ಅಭಿಯಂತರರು ತಿಳಿಸಿ ಮುಂದೆ ಅಂತಿಮ ನೋಟೀಸ್ ನೀಡಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

(ಇ) ದುಬಾಸಿಪಾಳ್ಯದ ಕೆರೆಯಿಂದ ಹರಿಬಿಡುತ್ತಿರುವ ಒಳ ಚರಂಡಿ ನೀರನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶ ನೀಡಬೇಕೆಂದು ಸದಸ್ಯರು ತಿಳಿಸಿರುತ್ತಾರೆ. ಕ್ರಮ ವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಪತ್ರ ವ್ಯವಹರಿಸುವುದಾಗಿ ಕಾರ್ಯದರ್ಶಿಯವರು ತಿಳಿಸಿರುತ್ತಾರೆ.

Scanned with CamScanner

(ಈ) ವಾರ್ಡ್ ಸಂಖ್ಯೆ:- 130ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ 03 ಕೆರೆಗಳ ಸರ್ವೆ ಕಾರ್ಯನಡೆಸಿ ಕೆರೆಯ ವಿಸ್ತೀರ್ಣದ ಬಗ್ಗೆ ಮಾಹಿತಿ ಒದಗಿಸಲು ಎಲ್ಲಾ ಸದಸ್ಯರು ಕೋರಿರುತ್ತಾರೆ. ಅದರಂತೆ ಸಂಬಂಧಿಸಿದ ಇಲಾಖಾ ಮುಖ್ಯಸ್ಥರಾದ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಹಾಗೂ ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಕಂದಾಯ ಭವನ, ಕೆಂಪೇಗೌಡ ರಸ್ತೆ, ಬೆಂಗಳೂರು ರವರಿಗೆ ಮುಂದಿನ ಸಭೆಗೆ ಹಾಜರಾಗಲು ಕೋರಲು, ಪ್ರಾಜೆಕ್ಟ್‌ಗೆ ಸಂಬಂಧಿಸಿದ ಅಧಿಕಾರಿಗಳು, ಪೋಲೀಸ್ ಅಧಿಕಾರಿಗಳು, ಆರೋಗ್ಯ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಿ ಸಂಬಂಧಿಸಿದ ಇಲಾಖಾ ಮಾಹಿತಿ ನೀಡಲು ಪತ್ರ ಬರೆಯುವುದಾಗಿ ಕಾರ್ಯದರ್ಶಿಯವರು ತಿಳಿಸಿರುತ್ತಾರೆ.

(ಉ) ಮುಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಮಾಹಿತಿಯನ್ನು ಸಭೆಗೆ ನೀಡಬೇಕೆಂದು ಕೋರಿರುತ್ತಾರೆ.

(ಊ) ಬೇಸಿಗೆ ಕಾಲ ಸಮೀಪಿಸುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿರುವ ಕೊಳವೆ ಬಾವಿಗಳ ಸಮರ್ಪಕ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕೆಂಧು ಎಲ್ಲಾ ಸದಸ್ಯರು ಕೋರಿರುತ್ತಾರೆ. ಅದರಂತೆ ಬೋರ್‌ವೆಲ್ ನಿರ್ವಹಣೆಯ ಗುತ್ತಿಗೆದಾರರಾದ ಶ್ರೀ ರವಿಚಂದ್ರ ರವರಿಗೆ ತಕ್ಷಣ ಪತ್ರ ಬರೆಯವುದಾಗಿ ಸಭೆಯಲ್ಲಿ ಹಾಜರಿದ್ದ ಕಾರ್ಯದರ್ಶಿಯವರು ತಿಳಿಸಿರುತ್ತಾರೆ.

(ಋ) ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಕೊರೆದಿರುವ ಕೊಳವೆ ಬಾವಿಗಳ ನಿರ್ವಹಣೆಮಾಡಿ ಸಾರ್ವಜನಿಕರಿಗೆ ನೀರಿನ ಕೊರತೆ ನಿವಾರಿಸಲು ಕೋರಿರುತ್ತಾರೆ.

(ಎ) ವಾರ್ಡ್ ನಂ.130ರ ವ್ಯಾಪ್ತಿಯಲ್ಲಿರುವ ನಾಗದೇವನಹಳ್ಳಿಯ ಭೂತಪ್ಪನ ದೇವಸ್ಥಾನದ ಅಕ್ಕಪಕ್ಕದಲ್ಲಿ ಹಾಗೂ ಜನತಾ ಕಾಲೋನಿಯಲ್ಲಿ ಮಳೆ ನೀರಿನ ಚರಂಡಿಯಲ್ಲಿ ಶೇಖರಗೊಂಡಿರುವ ಹೂಳನ್ನು ತೆಗೆಯಲು ತಿಳಿಸಿರುತ್ತಾರೆ.

(ಏ) ಉಪಾಧ್ಯಾಯ ಬಡಾವಣೆಯಲ್ಲಿರುವ ಸ್ಮಶಾನದ ಸ್ಥಳವನ್ನು ಸ್ವಚ್ಚಗೊಳಿಸುವುದು ಹಾಗೂ ಈಗಾಗಲೇ ನಿರ್ಮಿಸಿರುವ ಕುಡಿಯುವ ನೀರಿನ ಘಟಕವನ್ನು ಅತಿ ಶೀಘ್ರದಲ್ಲಿ ಪ್ರಾರಂಭಿಸಬೇಕೆಂದು ಉಪಾಧ್ಯಾಯ ಬಡಾವಣೆಯ ಅಧ್ಯಕ್ಷರು ತಿಳಿಸಿರುತ್ತಾರೆ. ಮುಂದುವರೆದು ಅನುದಾನದ ಲಭ್ಯತೆಯ ಆಧಾರದ ಮೇಲೆ ಕ್ರಮ ವಹಿಸುವುದಾಗಿ ಕಾರ್ಯದರ್ಶಿಯವರು ತಿಳಿಸಿರುತ್ತಾರೆ.

(ಐ) ವಾರ್ಡ್ ಸಂಖ್ಯೆ: 130 (ಉಲ್ಲಾಳ) ವ್ಯಾಪ್ತಿಯ ಪ್ರದೇಶಗಳಲ್ಲಿ ಸೊಳ್ಳೆ ಔಷಧ ಸಿಂಪಡಿಸುವ ಗುತ್ತಿಗೆದಾರರಿಗೆ ಮೌಖಿಕವಾಗಿ ಹಲವಾರುಬಾರಿ ತಿಳಿಸಿದರೂ, ಗುತ್ತಿಗೆದಾರರು ಸಮರ್ಪಕವಾಗಿ ಕಾರ್ಯನಿರ್ವಹಿಸದ ಕಾರಣ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿರುತ್ತದೆ. ಈ ಕಾರಣದಿಂದ ಸಾಂಕ್ರಾಮಿಕ

Scanned with CamScanner

ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಸಮರ್ಪಕವಾಗಿ ಕೆಲಸ ನಿರ್ವಹಿಸಲು ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆದಾರರನ್ನು ಬದಲಾಯಿಸಿ ಹೊಸ ಗುತ್ತಿಗೆದಾರರನ್ನು ನಿಯೋಜಿಸಬೇಕೆಂದು ಸಾರ್ವಜನಿಕರ ಹಾಗೂ ಸಮಿತಿ ಸದಸ್ಯರ ದೂರಿನ ಅನ್ವಯ ವಾರ್ಡ್ ಸಮಿತಿ ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನ ಕೈಗೊಳ್ಳಲಾಯಿತು.

(ಒ) ಕಂದಾಯ ಇಲಾಖೆಯವರು ಶ್ರೀಮತಿ ರಾಣಿ.ಆರ್ ಕೋಂ ಶ್ರೀನಿವಾಸ್.ಆರ್, ಸರ್ವೆ ನಂ.199, ಖಾತಾ ನಂ.269/199, ಉಲ್ಲಾಳ ಉಪನಗರ, ಬೆಂಗಳೂರು. ಈ ಫಲಾನುಭವಿಗೆ ಒಂಟಿ ಮನೆ ನಿರ್ಮಿಸಲು ಅನುದಾನ ನೀಡಲು ಶಿಫಾರಸ್ಸು ಮಾಡಿರುವ ಮೇರೆಗೆ ಸದರಿಯವರಿಗೆ 2021-22ನೇ ಸಾಲಿನ ಅನುದಾನದಡಿಯಲ್ಲಿ ಒಂಟಿ ಮನೆ ನಿರ್ಮಿಸುವ ಸಲುವಾಗಿ ಕಡತವನ್ನು ಸಂಬಂಧಿಸಿದ ಅಧಿಕಾರಿಯವರಿಗೆ ಸಲ್ಲಿಸಲು ನಿರ್ಣಯ ಕೈಗೊಳ್ಳಲಾಗಿರುತ್ತದೆ.

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರುಗಳ ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

K. M. [signature]

[signature]
(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

**ಪ್ರತಿಯನ್ನು:**

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ

Scanned with CamScanner